# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 383(464)
ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 19-02-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರೌಢಶಾಲೆಗಳನ್ನು ಪದವಿಪೂರ್ವ ಕಾಲೇಜುಗಳಾಗಿ ಉನ್ನತೀಕರಿಸಲು ಇಲಾಖೆಯು ಹೊರಡಿಸಿರುವ ಮಾರ್ಗಸೂಚಿಗಳೇನು; (ವಿವರ ನೀಡುವುದು) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಯಾವುದೇ ನಿಖರವಾದ ಮಾನದಂಡಗಳು ರಚನೆಯಾಗಿರುವುದಿಲ್ಲ. ಆದಾಗ್ಯೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡುವ ಕುರಿತಂತೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಬಹುದಾಗಿದೆ–<br><br>1. ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಮಾನದಂಡಗಳನ್ನು ರೂಪಿಸಲಾಗಿದ್ದು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅಥವಾ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಪದವಿ ಪೂರ್ವ ಕಾಲೇಜನ್ನಾಗಿ ಮೇಲ್ದರ್ಜೆಗೇರಿಸಲು ಯಾವುದೇ ನಿಖರವಾದ ಮಾನದಂಡಗಳು ರಚನೆಯಾಗಿರುವುದಿಲ್ಲ.<br>2. ರಾಜ್ಯದಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿನ ಶೈಕ್ಷಣಿಕ ವಾತಾವರಣವನ್ನು ಉತ್ತಮ ಪಡಿಸುವ ಉದ್ದೇಶದಿಂದ ಪ್ರತಿ 10–20 ಕಿಲೋ ಮೀಟರ್‌ಗೆ ಒಂದರಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡುವ ಬಗ್ಗೆ ಪರಿಗಣಿಸಲಾಗುತ್ತಿದೆ.<br>3. ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅಥವಾ ಪ್ರೌಢ ಶಾಲೆಗಳನ್ನು ಉನ್ನತೀಕರಿಸಲು ಉದ್ದೇಶಿಸಿರುವ ಕೆಲವು ಸ್ಥಳಗಳಲ್ಲಿ ಫೀಡೀಂಗ್ ಶಾಲೆಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯೆಯನ್ನು ಹಾಗೂ ಪ್ರೌಢ ಶಾಲೆಗಳನ್ನು ಉನ್ನತೀಕರಿಸಲು ನಿರ್ಧಾರಿಸಿರುವ ಪ್ರೌಢಶಾಲೆಯಲ್ಲಿ ಮೂಲಭೂತ ಸೌಲಭ್ಯಗಳು ಇರುವುದನ್ನು ಪರಿಗಣಿಸಲಾಗುತ್ತಿದೆ.<br>4. ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಪ್ರದೇಶಗಳ ಜನಸಂಖ್ಯೆ ಮತ್ತು ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣವನ್ನು ಗಮನಿಸಿ ಸ್ಥಳೀಯ ಜನ ಪ್ರತಿನಿಧಿಗಳು ಮತ್ತು ಗಣ್ಯವ್ಯಕ್ತಿಗಳ ಕೋರಿಕೆ ಮೇರೆಗೆ ಬೇಡಿಕೆ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತಿದೆ. |

| | | |
|---|---|---|
| | | 5. ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಕೆಲವು ಸ್ಥಳಗಳಲ್ಲಿ ಈಗಾಗಲೇ ಖಾಸಗಿ ಪದವಿ ಪೂರ್ವ ಕಾಲೇಜುಗಳಿದ್ದರೂ ಸಹ ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಸಲುವಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿದೆ. |
| ಆ) | ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಈ ಮಾರ್ಗಸೂಚಿಗಳನ್ವಯ ಎಷ್ಟು ಪ್ರೌಢಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಿಸುವ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದೆ; (ಮಾಹಿತಿ ನೀಡುವುದು) | ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಮಾರ್ಗಸೂಚಿಗಳನ್ವಯ ಪ್ರೌಢ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಿಸುವ ಕುರಿತಂತೆ ಸರ್ಕಾರಕ್ಕೆ ಸ್ವೀಕೃತವಾಗಿರವ ಪ್ರಸ್ತಾವನೆಯ ಮಾಹಿತಿಯನ್ನು ಅನುಗಂಧ-ಅ ರಲ್ಲಿ ಒದಗಿಸಿದೆ. |
| ಇ) | ಇವುಗಳಲ್ಲಿ ಎಷ್ಟು ಪ್ರಸ್ತಾವನೆಗಳನ್ನು ಪುರಸ್ಕರಿಸಿ ಇಲಾಖೆಯಿಂದ ಆದೇಶಿಸಲಾಗಿದೆ; (ಪ್ರೌಢಶಾಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಈ ಕೆಳಕಂಡ 05 ಪ್ರೌಢಶಾಲೆಗಳನ್ನು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಿಸಿ ಆದೇಶಿಸಲಾಗಿದೆ–<br><br>1) ಸರ್ಕಾರದ ಆದೇಶ ಸಂಖ್ಯೆ:ಇಪಿ 216 ಎಸ್‌ಹೆಚ್‌ಹೆಚ್ 2020 ದಿನಾಂಕ:25–11–2020ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಲ್ಯಪದವು, ಶಕ್ತಿನಗರ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ.<br><br>2) ಸರ್ಕಾರದ ಆದೇಶ ಸಂಖ್ಯೆ: ಇಪಿ 94 ಎಸ್ ಹೆಚ್‌ಹೆಚ್ 2022(ಭಾಗ–1) ದಿನಾಂಕ:09–06–2020ರಲ್ಲಿ (1) ಸರ್ಕಾರಿ ಪದವಿ ಪೂರ್ವ ಕಾಲೇಜು, ಮಣೂರು ಪಡಕೇರಿ ಬ್ರಹ್ಮಾವರ ತಾ, ಉಡಪಿ ಜಿಲ್ಲೆ ಮತ್ತು (2) ಸರ್ಕಾರಿ ಪದವಿ ಪೂರ್ವ ಕಾಲೇಜು, ಅಳಿಯೂರು, ಮೂಡಬಿದ್ರೆ ತಾ, ದಕ್ಷಿಣ ಕನ್ನಡ ಜಿಲ್ಲೆ.<br><br>3) ಸರ್ಕಾರದ ಆದೇಶ ಸಂಖ್ಯೆ:ಇಪಿ 94 ಎಸ್‌ಹೆಚ್‌ಹೆಚ್ 2022 ದಿನಾಂಕ:19–07–2022ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ದೇರಳಕಟ್ಟೆ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ.<br><br>4) ಸರ್ಕಾರದ ಆದೇಶ ಸಂಖ್ಯೆ:ಇಪಿ 186 ಎಸ್ ಹೆಚ್‌ಹೆಚ್ 2022(ಭಾಗ–3) ದಿನಾಂಕ:09–01–2024ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಅರೆಕಳ(ಅಜ್ಜಬ್ಬ), ಮಂಗಳೂರು ತಾ., ದಕ್ಷಿಣ ಕನ್ನಡ ಜಿಲ್ಲೆ. |

| | | |
|---|---|---|
| ಈ) | ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕು ಬಸ್ರೂರು ಸರ್ಕಾರಿ ಪ್ರೌಢಶಾಲೆಯನ್ನು ಉನ್ನತೀಕರಿಸುವ ಪ್ರಸ್ತಾವನೆಯನ್ನು ಇಲಾಖೆಯಲ್ಲಿ ಸ್ವೀಕರಿಸಲಾಗಿದೆಯೇ; ಇದರ ಬಗ್ಗೆ ಈವರೆಗೆ ಕೈಗೊಂಡ ಕ್ರಮಗಳೇನು; ಈ ಬಗ್ಗ ಸಚಿವಾಲಯ ಹಂತದಲ್ಲಿ ಮಂಡನೆಯಾದ ಕಛೇರಿ ಟಿಪ್ಪಣಿಯ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು; | ಹೌದು.<br><br>361 ಸರ್ಕಾರಿ ಪ್ರೌಢ ಶಾಲೆಗಳನ್ನು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆಯು ನಿರ್ದೇಶನಾಲಯದಿಂದ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯಲ್ಲಿ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಬಸ್ರೂರು ಸ್ಥಳದಲ್ಲಿ ಸರ್ಕಾರಿ ಪ್ರೌಢ ಶಾಲೆಯನ್ನು ಸರ್ಕಾರಿ ಪದವಿ ಪೂರ್ವ ಕಾಲೇಜನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆಯು ಸೇರಿರುತ್ತದೆ. ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು.<br><br>ಆರ್ಥಿಕ ಇಲಾಖೆಯು ಸದರಿ ಪ್ರಸ್ತಾವನೆಯನ್ನು ಕೋವಿಡ್-19 ರಿಂದಾಗಿ ಉಂಟಾಗಿರುವ ಆರ್ಥಿಕ ನಿರ್ಬಂಧಗಳ ಹಿನ್ನೆಲೆಯಲ್ಲಿ ಮುಂದಿನ 2 ವರ್ಷಗಳ ಅವಧಿಗೆ ಮುಂದೂಡುವಂತೆ ದಿನಾಂಕ:24-01-2022ರಂದು ತಿಳಿಸಿರುತ್ತದೆ.<br><br>ಪ್ರಸ್ತುತ ದಿನಾಂಕ:23-01-2024ಕ್ಕೆ ಎರಡು ವರ್ಷಗಳು ಮುಕ್ತಾಯವಾಗಿದ್ದು, ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲು ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ನಿಯಮಾನುಸಾರ ಪರಿಶೀಲಿಸಲಾಗುವುದು.<br><br>ಈ ಪ್ರಸ್ತಾವನೆಯ ಕುರಿತಂತೆ ಸಚಿವಾಲಯ ಹಂತದಲ್ಲಿ ವ್ಯವಹರಿಸಿರುವ ಕಡತ ಸಂಖ್ಯೆ:ಇಪಿ 229 ಎಸ್‌ಹೆಚ್‌ಹೆಚ್ 2021 ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದ್ದು, ಪ್ರಸ್ತುತ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |
| ಉ) | ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಬಸ್ರೂರು ಪ್ರೌಢಶಾಲೆಯಲ್ಲಿ ಸುತ್ತಮುತ್ತಲಿನ 20 ಗ್ರಾಮಗಳ ಬಡ ಕುಟುಂಬಗಳ 485 ವಿದ್ಯಾರ್ಥಿಗಳು ಓದುತ್ತಿದ್ದು, ಪ್ರತಿ ತರಗತಿಯಲ್ಲಿ ಎ, ಬಿ.ಸಿ ವಿಭಾಗಗಳಿದ್ದು, ಬಡ ವಿದ್ಯಾರ್ಥಿಗಳು 10ನೇ ತರಗತಿ ನಂತರ ಹೆಚ್ಚಿನ ಶುಲ್ಕ ಕೊಟ್ಟು ಖಾಸಗಿ ಕಾಲೇಜಿಗೆ ತೆರಳಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆಲ ಬಡ ಕುಟುಂಬದ ವಿದ್ಯಾರ್ಥಿಗಳು ಮುಂದಿನ ಶಿಕ್ಷಣದಿಂದ ವಂಚಿತರಾಗುತ್ತಿರುವುದರಿಂದ ಈ ಪ್ರೌಢಶಾಲೆಯನ್ನು ಉನ್ನತೀಕರಿಸುವುದು ಅವಶ್ಯಕವಾಗಿದ್ದು, ಯಾವಾಗ ಉನ್ನತೀಕರಿಸಿ ಆದೇಶ ಹೊರಡಿಸಲಾಗುವುದು? (ವಿವರ ನೀಡುವುದು) | |

**ಸಂಖ್ಯೆ: ಇಪಿ 51 ಡಿಜಿಡಬ್ಲ್ಯೂ 2024**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.